| ಕ್ರ. ಸಂ | ಜಿಲ್ಲೆಯ ಹೆಸರು | ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಖಾಲಿ ಹುದ್ದೆಗಳು | | ಸರ್ಕಾರಿ ಪ್ರೌಢ ಶಾಲಾ ಶಿಕ್ಷಕರ ಖಾಲಿ ಹುದ್ದೆಗಳು |
|---|---|---|---|---|
| | | ಸಾಮಾನ್ಯ ಶಿಕ್ಷಕರು | ವಿಶೇಷ ಶಿಕ್ಷಕರು | |
| 30 | ರಾಯಚೂರು | 692 | 39 | 227 |
| 31 | ಕೊಪ್ಪಳ | 367 | 45 | 150 |
| 32 | ಬೀದರ್ | 332 | 13 | 293 |
| | ಒಟ್ಟು | **7,753 +** | **626=8,379** | **5,984** |

462(456) ಶ್ರೀ ಚನ್ನಬಸವರಾಜ್ (ಅವ್ವಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಮುದ್ದೇಬಿಹಾಳ ಮತ್ತು ತಾಳಿಕೋಟೆ ಕೇಂದ್ರಸ್ಥಾನಗಳಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಬಂದಿದ್ದಲ್ಲಿ 2007-08ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ತಾಲ್ಲೂಕು ಕೇಂದ್ರ ಹಾಗೂ ತಾಳಿಕೋಟೆ ಪಟ್ಟಣದಲ್ಲಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಯೋಜಿಸಿದೆಯೇ?

ಶ್ರೀ ಬಿ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಹೌದು

ಆ) ಮುದ್ದೇಬಿಹಾಳದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಇರುವುದಿಲ್ಲ ತಾಳಿಕೋಟೆಯು ಹೋಬಳಿ ಕೇಂದ್ರವಾಗಿದ್ದು, 02 ಅನುದಾನಿತ ಖಾಸಗಿ ಪದವಿ ಪೂರ್ವ ಕಾಲೇಜುಗಳು ಇರುತ್ತವೆ ಶೈಕ್ಷಣಿಕ ಅಗತ್ಯತೆ, ಆಯವ್ಯಯದಲ್ಲಿನ ಹಣಕಾಸಿನ ಲಭ್ಯತೆ ಹಾಗೂ ಡಾ ನಂಜುಂಡಪ್ಪನವರ ವರದಿಯನ್ವಯ ಮುದ್ದೇಬಿಹಾಳ ತಾಲ್ಲೂಕು ಕೇಂದ್ರಕ್ಕೆ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು